**ಕರ್ನಾಟಕ ಸರ್ಕಾರ**

**ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, ಸಂಪಿಗೆ ರಸ್ತೆ, 18ನೇ ಕ್ರಾಸ್, ಮಲ್ಲೇಶ್ವರಂ, ಬೆಂಗಳೂರು-12**

ಸಂಖ್ಯೆ: ಪಪೂಶಿ/ಪರೀಕ್ಷೆ/ದ್ವಿಪ್ರಾ.ಪ/01/2019-20 ದಿನಾಂಕ: 11.02.2020.

<u>ಸು ತ್ತೋ ಲೆ</u>

ವಿಷಯ: 2019-20ನೇ ಶೈಕ್ಷಣಿಕ ಸಾಲಿನ ದ್ವಿತೀಯ ಪಿಯುಸಿ ವಿಜ್ಞಾನ ವಿಷಯಗಳ ಪ್ರಾಯೋಗಿಕ (Practical) ಪರೀಕ್ಷೆಯನ್ನು ನಡೆಸಲು ಅಂತಿಮವಾಗಿ ದಿನಾಂಕವನ್ನು ಮುಂದೂಡಿರುವ ಬಗ್ಗೆ.

ಉಲ್ಲೇಖ: ಪಪೂಶಿ/ಪರೀಕ್ಷೆ/ಪ್ರ.&ದ್ವಿಪ್ರಾ/2019-20 ದಿನಾಂಕ: 11.10.2019.

* * * *

ಮೇಲ್ಕಂಡ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ ದ್ವಿತೀಯ ಪಿಯುಸಿ ಪ್ರಾಯೋಗಿಕ ಪರೀಕ್ಷೆಗಳನ್ನು (IInd PUC Practical Exam) ದಿನಾಂಕ: 25.01.2020 ರಿಂದ ದಿನಾಂಕ 10.02.2020 ರೊಳಗಾಗಿ ನಡೆಸಲು ಜಿಲ್ಲಾ ಉಪನಿರ್ದೇಶಕರಿಗೆ ತಿಳಿಸಲಾಗಿತ್ತು.

ಕೆಲವು ವಿದ್ಯಾರ್ಥಿಗಳು ಅನಾರೋಗ್ಯದ ನಿಮಿತ್ತ, ಪ್ರಾಯೋಗಿಕ ಪರೀಕ್ಷೆಗೆ ಗೈರುಹಾಜರಾಗಿದ್ದು ಮತ್ತೊಮ್ಮೆ ಪ್ರಾಯೋಗಿಕ ಪರೀಕ್ಷೆಗೆ ಹಾಜರಾಗಲು ಅನುಮತಿ ಕೋರಿ ಮನವಿಗಳನ್ನು ಸಲ್ಲಿಸಿದ್ದಾರೆ.

ಅಲ್ಲದೆ ಕೆಲವು ಜಿಲ್ಲೆಗಳಲ್ಲಿ ಪ್ರಾಯೋಗಿಕ ಪರೀಕ್ಷೆಯನ್ನು ನಿಗಧಿತ ದಿನಾಂಕದೊಳಗೆ ನಡೆಸಲು ಹಲವಾರು ತಾಂತ್ರಿಕ ಕಾರಣಗಳಿಂದ ಸಾಧ್ಯವಾಗದಿರುವುದರಿಂದ ಜಿಲ್ಲಾ ಉಪನಿರ್ದೇಶಕರು ಹಾಗೂ ಪ್ರಾಯೋಗಿಕ ಪರೀಕ್ಷಾ ಕೇಂದ್ರದ ಮುಖ್ಯಸ್ಥರು ಪ್ರಾಯೋಗಿಕ ಪರೀಕ್ಷೆಗಳನ್ನು ಮುಂದೂಡುವಂತೆ ಕೋರಿರುತ್ತಾರೆ.

ಈ ಹಿನ್ನೆಲೆಯಲ್ಲಿ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಹಾಗೂ ಉಪನಿರ್ದೇಶಕರು ಮತ್ತು ಪ್ರಾಯೋಗಿಕ ಪರೀಕ್ಷಾ ಕೇಂದ್ರದ ಮುಖ್ಯಸ್ಥರ ಬೇಡಿಕೆಯಂತೆ ಗೈರುಹಾಜರಾದ ವಿದ್ಯಾರ್ಥಿಗಳಿಗೆ ದಿನಾಂಕ 11.02.2020 ರಿಂದ 13.02.2020 ರವರೆಗೆ ಪ್ರಾಯೋಗಿಕ ಪರೀಕ್ಷೆಗಳನ್ನು ನಡೆಸಲು ಅನುಮತಿ ನೀಡಲಾಗಿದೆ.

ನಿರ್ದೇಶಕರು

ಪದವಿ ಪೂವ ಶಿಕ್ಷಣ ಇಲಾಖೆ.

ಪ್ರತಿಯನ್ನು :

1. ರಾಜ್ಯದ ಎಲ್ಲ ಜಿಲ್ಲಾ ಉಪನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ.
2. ರಾಜ್ಯದ ಎಲ್ಲಾ ಪ್ರಾಯೋಗಿಕ ಪರೀಕ್ಷಾ ಕೇಂದ್ರದ ಮುಖ್ಯಸ್ಥರು, ಪದವಿ ಪೂರ್ವ ಶಿಕ್ಷಣ ಇಲಾಖೆ.
3. ಇಲಾಖಾ ಇ-ಆಡಳಿತ ವಿಭಾಗಕ್ಕೆ (ವೆಬ್ ಸೈಟ್‌ನಲ್ಲಿ ಪ್ರಕಟಿಸಲು)
4. ಕಛೇರಿ ಪ್ರತಿ.